ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343904/05.

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/86/ಸುತ್ತೋಲೆ/2016-17

ದಿನಾಂಕ:19.08.2017

# ಸುತ್ತೋಲೆ

ವಿಷಯ: **ದಿನಾಂಕ:19.08.2017ನ್ನು "ಸದ್ಭಾವನಾ ದಿನ"ವನ್ನಾಗಿ ಮತ್ತು ದಿನಾಂಕ:20.08.2017 ರಿಂದ 02.09.2017 ರವರೆಗೆ "ಕೋಮು ಸೌಹಾರ್ದ ಪಾಕ್ಷಿಕ"** (Communal Harmony Fortnight) ಅನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂ:ಸಿಆಸುಇ/01/ರಾಐಸ/2017, ದಿನಾಂಕ:01.08.2017.

* * * * * *

ಎಲ್ಲಾ ಧರ್ಮ, ಭಾಷೆ ಹಾಗೂ ರಾಜ್ಯಗಳ ಜನರಲ್ಲಿ ಸೌಹಾರ್ದತೆಯನ್ನು ಉತ್ತೇಜಿಸಿ ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ, ಹಿಂಸಾಚಾರವನ್ನು ತ್ಯಜಿಸುವಂತೆ ಮಾಡಲು ಕೇಂದ್ರ ಸರ್ಕಾರದ ಆದೇಶದಂತೆ ಪ್ರತಿ ವರ್ಷ **20ನೇ ಆಗಸ್ಟ್** ರಂದು **"ಸದ್ಭಾವನಾ ದಿನ"**ವನ್ನಾಗಿ ಆಚರಿಸಲಾಗುತ್ತಿದೆ. ಆದರೆ ಈ ಸಾಲಿನಲ್ಲಿ ದಿನಾಂಕ:20.08.2017 ಭಾನುವಾರ ಸಾರ್ವತ್ರಿಕ ರಜಾ ದಿನವಾಗಿರುವುದರಿಂದ, ಈ ವರ್ಷ ದಿನಾಂಕ:19.08.2017 ರಂದು ಸಧ್ಭಾವನಾ ದಿನವನ್ನಾಗಿ ಮತ್ತು **ದಿನಾಂಕ:20.08.2017 ರಿಂದ 02.09.2017 ರವರೆಗೆ "ಕೋಮು ಸೌಹಾರ್ದ ಪಾಕ್ಷಿಕ"** (Communal Harmony Fortnight) ಅನ್ನು ಆಚರಿಸುವಂತೆ ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ಸೂಚಿಸಲಾಗಿರುತ್ತದೆ.

ಈ ಸಂಬಂಧ, ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆಯ ಪ್ರತಿ ಇದೊರೊಂದಿಗೆ ಲಗತ್ತಿಸಿ, ರವಾನಿಸುತ್ತಾ, ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಅನುದಾನ ರಹಿತ ಕಾಲೇಜುಗಳಲ್ಲಿ **ದಿನಾಂಕ:19.08.2017 ರಂದು "ಸದ್ಭಾವನಾ ದಿನ"**ವನ್ನಾಗಿ ಮತ್ತು **ದಿನಾಂಕ:20.08.2017 ರಿಂದ 02.09.2017 ರವರೆಗೆ "ಕೋಮು ಸೌಹಾರ್ದ ಪಾಕ್ಷಿಕ"** (Communal Harmony Fortnight) ವನ್ನು ಭಾರತ್ ಸ್ಕೌಟ್ಸ್ & ಗೈಡ್ಸ್ ಮತ್ತು ಯೂತ್ ಅಸೋಸಿಯೇಷನ್ ಸಹಕಾರದೊಂದಿಗೆ ರಾಜ್ಯದ ವಿಭಾಗ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ಕಾರ್ಯಕ್ರಮಗಳನ್ನು ಏರ್ಪಡಿಸಿ, ಸದ್ಭಾವನಾ ದಿನವನ್ನು ಆಚರಿಸುವುದರೊಂದಿಗೆ ಪ್ರತಿಜ್ಞೆಯನ್ನು ಸ್ವೀಕರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾಗಿದೆ.

ಕಾರ್ಯಕ್ರಮವನ್ನು ನಡೆಸಿದ ಬಗ್ಗೆ ತಮ್ಮ ಕಛೇರಿ ವ್ಯಾಪ್ತಿಯ ಕಾಲೇಜುಗಳಿಂದ ಮಾಹಿತಿಯನ್ನು ಪಡೆದು ಒಂದು ಕ್ರೋಢೀಕೃತ ಅನುಪಾಲನಾ ವರದಿಯನ್ನು ಈ ಕಛೇರಿಗೆ ಸಲ್ಲಿಸುವಂತೆ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

ಇವರಿಗೆ,

1) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗಾ.
2) ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಶಿಇ ಕಛೇರಿ, ಬೆಂಗಳೂರು-ವೆಬ್‌ಸೈಟ್‌ನಲ್ಲಿ ಪ್ರಕಟಿಸಲು

ಪ್ರತಿಯನ್ನು:

1) ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ರಾಜಕೀಯ) ವಿಧಾನಸೌಧ, ಬೆಂಗಳೂರು-560001.
2) ಮಾನ್ಯ ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಹಾಗೂ ಜಂಟಿ ನಿರ್ದೇಶಕರ ಆಪ್ತಶಾಖೆಗೆ.
3) ಕಛೇರಿ ಪ್ರತಿ.

# ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆ

ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಭೇದಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲ ಭೇದಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇವೆಂದು ಸಹ ಪ್ರತಿಜ್ಞೆ ಮಾಡುತ್ತೇನೆ.